# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 344 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 21.12.2022 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರ ಘೋಷಿಸಿದ ಹೊಸ ತಾಲ್ಲೂಕುಗಳ ಅಗತ್ಯ ಮೂಲಭೂತ ಸೌಲಭ್ಯಗಳಿಗಾಗಿ ಸರ್ಕಾರದಿಂದ ಪ್ರತ್ಯೇಕ ಅನುದಾನ ಒದಗಿಸಲಾಗಿದೆಯೇ; (ತಾಲ್ಲೂಕುವಾರು ವಿವರ ನೀಡುವುದು) | ಹೊಸ ತಾಲ್ಲೂಕುಗಳಲ್ಲಿ ತಾಲ್ಲೂಕು ಆಡಳಿತ ಸೌಧ ನಿರ್ಮಿಸಲು ಜಮೀನು ಗುರುತಿಸಿ, ಸವಿವರ ಅಂದಾಜು ಪಟ್ಟಿ ಮತ್ತು ನಕ್ಷೆಯೊಂದಿಗೆ ಜಿಲ್ಲಾಧಿಕಾರಿಗಳು ಪ್ರಸ್ತಾವನೆ ಸಲ್ಲಿಸಿದಲ್ಲಿ, ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 100 ಡಬ್ಲ್ಯೂಬಿಆರ್ 2017; ದಿನಾಂಕ: 31.10.2017 ರನ್ವಯ ರಾಜ್ಯದಲ್ಲಿ ಹೊಸದಾಗಿ ತಾಲ್ಲೂಕು ಆಡಳಿತ ಸೌಧ ಕಟ್ಟಡಕ್ಕೆ ಬೇಕಾದ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ಪೀಠೋಪಕರಣ, ಒಳಾಂಗಣ ವಿನ್ಯಾಸ, ವಿದ್ಯುಚ್ಛಕ್ತಿ ಸೌಲಭ್ಯ, ಶೌಚಾಲಯ, ಲಿಫ್ಟ್ ಅಳವಡಿಕೆ ಇನ್ನಿತರೆ ಎಲ್ಲಾ ಪೂರಕ ಸೌಲಭ್ಯಗಳನ್ನು ಒಳಗೊಂಡಂತೆ ಕಡ್ಡಾಯವಾಗಿ ರೂ.10.00 ಕೋಟಿಗಳ ಮಿತಿಯಲ್ಲಿ ನಿರ್ಮಿಸಲು ಅವಕಾಶ ಕಲ್ಪಿಸಲಾಗಿದೆ. ಅನುದಾನದ ಲಭ್ಯತೆಯನ್ನಾಧರಿಸಿ, ಆರ್ಥಿಕ ಇಲಾಖೆ ಸಹಮತಿಯೊಂದಿಗೆ ಅನುಮೋದನೆ ನೀಡಲಾಗುತ್ತಿದೆ. |
| ಆ) | ಸರ್ಕಾರ ಘೋಷಿಸಿದ ಹೊಸ ತಾಲ್ಲೂಕುಗಳಲ್ಲಿ ಎಲ್ಲಾ ಇಲಾಖೆಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿದೆಯೆ; ತಾಲ್ಲೂಕು ಮಟ್ಟದ ಇಲಾಖೆಗಳಿಗೆ ಕಛೇರಿ ಪ್ರಾರಂಭಿಸಲು ಸ್ಥಳಾವಕಾಶ ಕಟ್ಟಡ ಹಾಗೂ ಇತರ ಅಗತ್ಯ ಮೂಲಭೂತ ಸೌಲಭ್ಯಗಳನ್ನು ನೀಡಲಾಗಿದೆಯೇ; (ತಾಲ್ಲೂಕುವಾರು ವಿವರ ನೀಡುವುದು) | ಹೊಸದಾಗಿ ಸೃಜನೆಯಾಗಿರುವ ತಾಲ್ಲೂಕುಗಳ ಪೈಕಿ ಚಿಕ್ಕಬಳ್ಳಾಪುರ ಜಿಲ್ಲೆಯ ಮಂಚೇನಹಳ್ಳಿ, ರಾಮನಗರ ಜಿಲ್ಲೆಯ ಹಾರೋಹಳ್ಳಿ ಹಾಗೂ ಬಾಗಲಕೋಟೆ ಜಿಲ್ಲೆಯ ತೇರದಾಳ ತಾಲ್ಲೂಕನ್ನು (ದಿನಾಂಕ: 04.11.2022 ರಂದು ಘೋಷಿಸಲಾಗಿರುತ್ತದೆ) ಇತ್ತೀಚೆಗೆ ಘೋಷಿಸಲಾಗಿದ್ದು, ಸದರಿ ತಾಲ್ಲೂಕುಗಳನ್ನು ಹೊರತುಪಡಿಸಿ, ಇನ್ನುಳಿದಂತೆ ತಾಲ್ಲೂಕು ಮಟ್ಟದ ತಹಶೀಲ್ದಾರ್ ಕಛೇರಿಗಳನ್ನು ಪ್ರಾರಂಭಿಸಲಾಗಿದೆ ಮತ್ತು ಇತರೆ ಇಲಾಖೆಗಳ ತಾಲ್ಲೂಕು ಮಟ್ಟದ ಕಛೇರಿಗಳನ್ನು ಪ್ರಾರಂಭಿಸಲು ಅನುವಾಗುವಂತೆ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಅಗತ್ಯ ಸಂಖ್ಯೆಯ ಹುದ್ದೆಗಳನ್ನು ಮಂಜೂರು ಮಾಡಿ ಕಛೇರಿಗಳನ್ನು ಪ್ರಾರಂಭಿಸುವಂತೆ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳಿಗೆ ನಿರ್ದೇಶ ನೀಡಲಾಗಿದೆ. ಅದರಂತೆ, ಆಯಾ ಇಲಾಖಾ ವತಿಯಿಂದ ಹಂತಹಂತವಾಗಿ ತಾಲ್ಲೂಕು ಮಟ್ಟದ ಕಛೇರಿಗಳನ್ನು ಪ್ರಾರಂಭಿಸಲಾಗುತ್ತಿದೆ. |
| ಇ) | ಕಟ್ಟಡ ಕಟ್ಟಲು ಸ್ಥಳದ ಅಗತ್ಯವಿರುವ ತಾಲ್ಲೂಕು ಮಟ್ಟದ ಇಲಾಖೆಗಳಿಗೆ ನಿವೇಶನವನ್ನು/ಜಾಗವನ್ನು ಮಂಜೂರು ಮಾಡಲಾಗಿದೆಯ; ಪ್ರಸ್ತುತ ಸದರಿ ಜಾಗ ಮಂಜೂರಾತಿ ಪ್ರಸ್ತಾವನೆ ಯಾವ ಹಂತದಲ್ಲಿವೆ; ಎಷ್ಟು ಅವಧಿಯೊಳಗೆ ಜಾಗ ಮಂಜೂರಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು; (ತಾಲ್ಲೂಕುಗಳ ತಾಲ್ಲೂಕುವಾರು ವಿವರ ನೀಡುವುದು) | ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ರ ಕಲಂ 71 ರಡಿ ಸಾರ್ವಜನಿಕ ಉದ್ದೇಶಗಳಾದ ಶಾಲೆ, ಕಾಲೇಜು, ಆಸ್ಪತ್ರೆ, ಸರ್ಕಾರಿ ಕಛೇರಿಗಳ ಕಟ್ಟಡ ಮುಂತಾದ ಉದ್ದೇಶಗಳಿಗಾಗಿ ಸರ್ಕಾರಿ ಇಲಾಖೆಗಳಿಗೆ ಜಮೀನನ್ನು ಕಾಯ್ದಿರಿಸಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ, ಅಗತ್ಯತೆಗೆ ಅನುಗುಣವಾಗಿ ಸರ್ಕಾರಿ ಇಲಾಖೆಯ ಕೋರಿಕೆಯ ಮೇರೆಗೆ ಜಮೀನನ್ನು ಕಾಯ್ದಿರಿಸಲು ಜಿಲ್ಲಾಧಿಕಾರಿಯವರು ಕ್ರಮವಹಿಸುತ್ತಿದ್ದಾರೆ. |